# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 989 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 15-12-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿ 30 ಕೆವಿ ವಿದ್ಯುತ್ ಘಟಕ ಪ್ರಾರಂಭ ಮಾಡುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ; | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿ 33 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪಿಸಲು ದಿನಾಂಕ 17.03.2025 ರಂದು ಆದೇಶ ನೀಡಲಾಗಿದೆ.<br>ಉಪಕೇಂದ್ರ ಸ್ಥಾಪನೆಗೆ ಮಂಜೂರಾಗಿರುವ ಸರ್ಕಾರಿ ಜಮೀನಿನಲ್ಲಿರುವ ಕೆಲವೊಂದು ಮರ- ಗಿಡಗಳನ್ನು ತೆರವುಗೊಳಿಸಲು ಅರಣ್ಯ ಇಲಾಖೆಯಿಂದ ಆಕ್ಷೇಪಣೆ ಇರುವುದರಿಂದ, ಅರಣ್ಯ ಇಲಾಖೆಯ ಮಂಜೂರಾತಿಗಾಗಿ ದಿನಾಂಕ 21-11-2025 ರಂದು ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br>ಅರಣ್ಯ ಇಲಾಖೆಯಿಂದ ಮಂಜೂರಾತಿ ದೊರೆತ ತಕ್ಷಣ 33 ಕೆ.ವಿ. ವಿದ್ಯುತ್ ಉಪಕೇಂದ್ರದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.<br>ಸದರಿ ಉಪಕೇಂದ್ರದ 33 ಕೆ.ವಿ. ಮಾರ್ಗಗಳ (ಲೈನ್) ಕಾಮಗಾರಿಗಳು ಪ್ರಸ್ತುತ ಪ್ರಗತಿಯಲ್ಲಿರುತ್ತದೆ. |
| ಆ) | ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ನಿಗದಿ ಮಾಡಿ, ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆಯೇ; | ಸದರಿ ಕಾಮಗಾರಿಗೆ ಬೆಳ್ತಂಗಡಿ ತಾಲೂಕು, ಉಜಿರೆ ಗ್ರಾಮದ ಸರ್ವೆನಂ:393/3 ರಲ್ಲಿ 0.96 ಎಕರೆ ಸರಕಾರಿ ಜಮೀನು ಮಂಜೂರಾಗಿದ್ದು, ಜಿಲ್ಲಾಧಿಕಾರಿಯವರ ಆದೇಶದಂತೆ ಸಂಬಂಧಪಟ್ಟ ಮೊತ್ತಗಳನ್ನು ಪಾವತಿಸಲಾಗಿದ್ದು, ಮೆಸ್ಕಾಂ ಹೆಸರಿಗೆ RTC ವರ್ಗಾವಣೆಗೊಂಡಿರುತ್ತದೆ ಹಾಗೂ ಸದರಿ ಜಾಗದಲ್ಲಿ ಉಪಕೇಂದ್ರ ನಿರ್ಮಿಸಲು ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲಾಗಿದ್ದು, ದಿನಾಂಕ 17.03.2025 ರಂದು ಆದೇಶ ನೀಡಲಾಗಿದೆ. |
| ಇ) | ಸದರಿ ಕಾಮಗಾರಿಗೆ ಮಂಜೂರಾಗಿರುವ, ಬಿಡುಗಡೆಯಾಗಿರುವ ಹಾಗೂ ಇಲ್ಲಿಯವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; | ಮೆಸ್ಕಾಂನ ಬಂಡವಾಳ ಕಾಮಗಾರಿ ಯೋಜನೆಯಡಿ (CAPEX) ಸದರಿ ಕಾಮಗಾರಿಗೆ ರೂ.2526.00 ಲಕ್ಷ ನಿಗದಿಪಡಿಸಲಾಗಿದ್ದು, ಈವರೆಗೆ ರೂ. 489.13 ಲಕ್ಷ ವಿನಿಯೋಗಿಸಲಾಗಿದೆ. |
| ಈ) | ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ಈಗಾಗಲೇ ನಿಗದಿ ಮಾಡಿ, ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಸಹ ಪೂರ್ಣಗೊಳಿಸಲಾಗಿದ್ದಲ್ಲಿ, ಕಾಮಗಾರಿಯ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ; | ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ಈಗಾಗಲೇ ನಿಗದಿ ಮಾಡಿ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲಾಗಿದ್ದು ದಿನಾಂಕ 17.03.2025 ರಂದು ಆದೇಶ ನೀಡಲಾಗಿದೆ.<br>ಪ್ರಸ್ತುತ 33 ಕೆ.ವಿ. ಲೈನ್ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |

| | | |
|---|---|---|
| ಉ) | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿ 30 ಕೆವಿ ವಿದ್ಯುತ್ ಘಟಕ ಈಗಾಗಲೇ ಕಾರ್ಯಾರಂಭ ಮಾಡಿದೆಯೇ; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು; ಮತ್ತು ಯಾವ ಕಾಲಮಿತಿಯೊಳಗೆ, ಸದರಿ ಘಟಕವನ್ನು ಕಾರ್ಯಾರಂಭ ಮಾಡಲಾಗುವುದು? | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿ 33/11 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪಿಸಲು ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿಯನ್ನು ನಿರ್ವಹಿಸಲು ಆದೇಶ ನೀಡಲಾಗಿದೆ.<br>ಉಪಕೇಂದ್ರ ಸ್ಥಾಪನೆಗೆ ಮಂಜೂರಾಗಿರುವ ಸರ್ಕಾರಿ ಜಮೀನಿನಲ್ಲಿರುವ ಕೆಲವೊಂದು ಮರ- ಗಿಡಗಳನ್ನು ತೆರವುಗೊಳಿಸಲು ಅರಣ್ಯ ಇಲಾಖೆಯಿಂದ ಆಕ್ಷೇಪಣೆ ಇರುವುದರಿಂದ, ಅರಣ್ಯ ಇಲಾಖೆಯ ಮಂಜೂರಾತಿಗಾಗಿ ಪತ್ರ ಸಂಖ್ಯೆ: FP/KA/SUBSTATION/ 559009/ 2025 ದಿನಾಂಕ 21-11-2025 ರಂದು ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br><br>ಅರಣ್ಯ ಇಲಾಖೆಯಿಂದ ಮಂಜೂರಾತಿ ದೊರೆತ ತಕ್ಷಣ ಮೆಸ್ಕಾಂ ವತಿಯಿಂದ 33 ಕೆ.ವಿ. ವಿದ್ಯುತ್ ಉಪಕೇಂದ್ರದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |

ಸಂಖ್ಯೆ: ಎನರ್ಜಿ 295 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು